# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 42 | SUNDAY 19-04-2026 | PRGI No : KNKAN/26/A0962 | Pages:4 | Rs.2.00 | M: 9742418836


## ದಾವಣಗೆರೆ ದಂಗಲ್: ದೆಹಲಿ ನಾಯಕರ ಸೂಚನೆ ಮೇರೆಗೆ ಮುಸ್ಲಿಂ ನಾಯಕರ ವಿರುದ್ಧ ಕ್ರಮ; ಡಿಕೆಶಿ



ಬೆಂಗಳೂರು: ಇತ್ತೀಚೆಗೆ ನಡೆದ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಸಂಬಂಧಿಸಿದಂತೆ ಫಲಿತಾಂಶಕ್ಕೂ ಮುನ್ನವೇ ರಾಜ್ಯ ಕಾಂಗ್ರೆಸ್‌ನಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಯಾಗಿದ್ದು, ಹಲವು ಮುಸ್ಲಿಂ ನಾಯಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗಿದೆ.

ಅಲ್ಪಸಂಖ್ಯಾತ ನಾಯಕರ ವಿರುದ್ಧದ ಕ್ರಮವನ್ನು ಸಮರ್ಥಿಸಿಕೊಂಡ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ದೆಹಲಿ ನಾಯಕರ ಸೂಚನೆ ಮೇರೆಗೆ ಕ್ರಮ ತೆಗೆದುಕೊಳ್ಳಲಾಗಿದೆ. ಇದರಲ್ಲಿ ನನ್ನ ವೈಯಕ್ತಿಕ ವಿಚಾರ ಏನೂ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಇಂದು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಡಿಕೆಶಿ, ನೋಡಿ, ನನ್ನ ವೈಯಕ್ತಿಕ ವಿಚಾರ ಯಾವುದೂ ಇಲ್ಲ. ಎಲ್ಲವೂ ಪಾರ್ಟಿ ನಿರ್ಧಾರ, ಪಾರ್ಟಿಗೆ ತನ್ನದೇ ಆದ ವರದಿ ಇದೆ. ದೆಹಲಿ ನಾಯಕರ ಸೂಚನೆ, ಸಲಹೆ ಮೇರೆಗೆ ನಾವು ಕ್ರಮ ತೆಗೆದುಕೊಳ್ಳಬೇಕಾಗುತ್ತದೆ. ನಾವು ಮಾರ್ಗದರ್ಶನ ಮಾಡಬೇಕಾಗುತ್ತದೆ ಎಂದರು.

ಎಲ್ಲರೂ ನನ್ನ ವಿರುದ್ಧವೇ ಮಾತನಾಡಬಹುದು. ಆದರೆ, ಹಾಗೆ ಹೇಳಿದರೂ ಚಿಂತೆ ಇಲ್ಲ. ಪಕ್ಷದ ಶಿಸ್ತಲ್ಲಿ ನಾವು ಕೆಲಸ ಮಾಡಬೇಕಾಗುತ್ತದೆ. ನಮ್ಮ ಪಕ್ಷ ಇರೋದೇ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತ, ಅಹಿಂದ ಸಮುದಾಯದ ಪರ. ಎಲ್ಲಾ ವರ್ಗಕ್ಕೆ ನ್ಯಾಯ ಕೊಡೋಕೆ ಇರೋದೇ ಕಾಂಗ್ರೆಸ್ ಪಕ್ಷ ಎಂದು ತಿಳಿಸಿದರು.

ಸಿದ್ದರಾಮಯ್ಯ ಬಣ, ಡಿಕೆಶಿ ಬಣ ಅಂತಾ ಯಾವುದೂ ಇಲ್ಲ. ನಾವು ೧೪೬ ಶಾಸಕರು ಒಂದೇ ಬಣ. ನಾನು, ಸಿಎಂ ಕೂತು ಎಷ್ಟು ಮಾತಾಡ್ತೇವೆ ಅಂತಾ ನಿಮಗೇನು ಗೊತ್ತು. ದಿನವೂ ಕುಳಿತುಕೊಳ್ಳುತ್ತೇವೆ, ದಿನಾ ಕೂಡ ಮಾತಾಡುತ್ತೇವೆ. ಅವರೇನು ಸಿದ್ದರಾಮಯ್ಯ ಅವರ ಬಣ ಅಂತ ಬೋರ್ಡ್ ಹಾಕಿಕೊಂಡಿದ್ದಾರಾ? ನನ್ನ ಬಣ ಅಂತ ನಾನು ಬೋರ್ಡ್ ಹಾಕಿಕೊಂಡಿದ್ದೀನಾ? ೧೪೦ ಶಾಸಕರು ಕೂಡ ನನ್ನ ಮತ್ತು ಸಿಎಂ ಅವರ ಗುಂಪೇ. ಯಾವ ಗುಂಪು, ಬಣ ಇಲ್ಲ. ಯಾವ ಸ್ಟೇಟ್ಮೆಂಟ್ ಇಲ್ಲ. ನಮ್ಮದು ಒಂದೇ ಗುಂಪು, ಅದು ಕಾಂಗ್ರೆಸ್ ಗುಂಪು ಎಂದು ಸ್ಪಷ್ಟಪಡಿಸಿದರು.

## ಸಂಪುಟ ಸಭೆಯಲ್ಲೂ ಸದ್ದು ಮಾಡಿದ ದಾವಣಗೆರೆ ದಂಗಲ್: ಮುಸ್ಲಿಂ ನಾಯಕರ ವಿರುದ್ಧ ಕ್ರಮಕ್ಕೆ ಸಚಿವರೇ ಆಕ್ಷೇಪ !





ಬೆಂಗಳೂರು: ದಾವಣಗೆರೆ ದಕ್ಷಿಣ ಉಪಚುನಾವಣೆ ಫಲಿತಾಂಶ ಹೊರಬೀಳಬೇಕಿದೆ, ಅಷ್ಟರೊಳಗೆ ಕಾಂಗ್ರೆಸ್ ನೊಳಗೆ ಹಲವು ಬೆಳವಣಿಗೆಗಳು ನಡೆದು ಹೋಗಿವೆ. ದಾವಣಗೆರೆ ದಕ್ಷಿಣದಲ್ಲಿ ಮುಸಲ್ಮಾನ ನಾಯಕರಿಗೆ ಟಿಕೆಟ್ ಕೈತಪ್ಪಿದ ವಿಚಾರಕ್ಕೆ ನಡೆದ ರಾಜಕೀಯ ಬೆಳವಣಿಗೆಗಳಿಂದ ಇಬ್ಬರು ನಾಯಕರು ತಮ್ಮ ಸ್ಥಾನ ಕಳೆದುಕೊಳ್ಳುವಂತಾಯಿತು.


ಕೆಪಿಸಿಸಿ ಮಟ್ಟದಲ್ಲಿ ಮುಸ್ಲಿಂ ನಾಯಕರ ವಿರುದ್ಧ ತೆಗೆದುಕೊಂಡ ಕಠಿಣ ಕ್ರಮಗಳು ಈಗ ಸರ್ಕಾರದ ಒಳಗೂ ಸಂಚಲನ ಮೂಡಿಸಿವೆ. ಎಂಎಲ್?ಸಿ ಅಬ್ದುಲ್ ಜಬ್ಬಾರ್ ಅಮಾನತು ಮತ್ತು ಸಿಎಂ ರಾಜಕೀಯ ಕಾರ್ಯದರ್ಶಿ ಸ್ಥಾನದಿಂದ ನಸೀರ್ ಅಹ್ಮದ್ ರಾಜೀನಾಮೆ ವಿಚಾರ ನಿನ್ನೆ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಆಸ್ಫೋಟಗೊಂಡಿತು.

**ನಿನ್ನೆ ಸಂಪುಟ ಸಭೆಯಲ್ಲಿ ಏನು ನಡೆಯಿತು?**

ಮುಸ್ಲಿಂ ನಾಯಕರ ವಿರುದ್ಧದ ಕ್ರಮಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಸತೀಶ್ ಜಾರಕಿಹೊಳಿ ಸೇರಿದಂತೆ ಹಲವು ಸಚಿವರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು ಎನ್ನಲಾಗುತ್ತಿದೆ. ನಾವು ಮುಸ್ಲಿಂ ಸಮುದಾಯವನ್ನು ಕಳೆದುಕೊಳ್ಳುತ್ತಿದ್ದೇವೆ ಎಂದು ಪ್ರಿಯಾಂಕ್ ಖರ್ಗೆ ಎಚ್ಚರಿಸಿದರೆ, ಅಬ್ದುಲ್ ಜಬ್ಬಾರ್ ಮೇಲೆ ಕ್ರಮ ಕೈಗೊಂಡಿದ್ದು ತೀರಾ ಅವಸರದ ನಿರ್ಧಾರ. ಇದು ಸಮುದಾಯವೇ ನಮಗೆ ಸವಾಲು ಹಾಕುವಂತೆ ಮಾಡಿದೆ ಎಂದು ಸತೀಶ್ ಜಾರಕಿಹೊಳಿ ಹೇಳಿದ್ದಾರೆ ಎಂದು ತಿಳಿದುಬಂದಿದೆ.


**ಲಿಂಗಾಯತ ಸಚಿವರ ಪ್ರತಿವಾದ**

ಈ ವೇಳೆ ಮಧ್ಯಪ್ರವೇಶಿಸಿದ ಲಿಂಗಾಯತ ಸಮುದಾಯದ ಸಚಿವರು, ಪಕ್ಷಕ್ಕಿಂತ ಯಾರೂ ದೊಡ್ಡವರಲ್ಲ, ತಪ್ಪಾದಾಗ ಕ್ರಮ ಅನಿವಾರ್ಯ ಎಂದರು. ವಾದ–ಪ್ರತಿವಾದಗಳು ತಾರಕಕ್ಕೇರುತ್ತಿದ್ದಂತೆಯೇ ಡಿಸಿಎಂ ಡಿಕೆ ಶಿವಕುಮಾರ್ ಮತ್ತು ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಸಭೆಯಿಂದ ಹೊರನಡೆದ ಘಟನೆ ನಡೆದಿದೆ ಎಂದು ಮೂಲಗಳಿಂದ ತಿಳಿದುಬಂದಿದೆ. ಕೊನೆಗೆ ಸಿಎಂ ಸಿದ್ದರಾಮಯ್ಯ ಮಧ್ಯಪ್ರವೇಶಿಸಿ ಸಚಿವ ಜಮೀರ್ ಅಹ್ಮದ್ ಖಾನ್ ಅವರನ್ನು ಸಮಾಧಾನಪಡಿಸಿದ ಮೇಲೆ ಸಭೆ ತಿಳಿಯಾಯಿತು ಎಂದು ಹೇಳಲಾಗುತ್ತಿದೆ.



## ಕೆಎಲ್‌ಇ ಸಂಸ್ಥೆಯ ಮಹಾದೇವಪ್ಪಣ್ಣ ಮುನವಳ್ಳಿ ಸಿ.ಬಿ.ಎಸ್.ಇ ಶಾಲೆಗೆ ಸತತ 16ನೇ ಬಾರಿಗೆ ಶೇ ನೂರಕ್ಕೆ ನೂರು ಫಲಿತಾಂಶ




**ಬೆಳಗಾವಿ ವಾರ್ತೆ ಗೋಕಾಕ:** ನಗರದ ಕೆಎಲ್‌ಇ ಸಂಸ್ಥೆಯ ಮಹಾದೇವಪ್ಪಣ್ಣ ಮುನವಳ್ಳಿ ಸಿಬಿಎಸ್‌ಇ ಶಾಲೆಯು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 16ವರ್ಷಗಳಿಂದಲೂ ಸತತವಾಗಿ ಶೇ100ರಷ್ಟು ಫಲಿತಾಂಶವನ್ನು ಪಡೆದಿದೆ.

ಪರೀಕ್ಷೆಗೆ ಹಾಜರಾದ 107 ವಿದ್ಯಾರ್ಥಿಗಳಲ್ಲಿ 69 ವಿದ್ಯಾರ್ಥಿಗಳು ಡಿಸ್ಟಿಂಕ್ಷನನಲ್ಲಿ 77 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ 11 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ತನು ಬಳಿಗಾರ 484(96.8) ಪ್ರಥಮ, ರವೀನಾ ಬೆಣ್ಣಿ 476(95.2) ದ್ವಿತೀಯ, ಆರುಷಿ ಚಿಗಡೊಳ್ಳಿ 473(946) ತೃತೀಯ ಸ್ಥಾನ ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಯನ್ನು ಕೆಎಲ್‌ಇ ನಿರ್ದೇಶಕ ಜಯಾನಂದ ಮುನವಳ್ಳಿ, ಆಡಳಿತ ಮಂಡಳಿ, ಪ್ರಾಚಾರ್ಯರು ಮತ್ತು ಶಿಕ್ಷಕ, ಶಿಕ್ಷಕೇತರ ಸಿಬ್ಬಂಧಿ ಅಭಿನಂಧಿಸಿದ್ದಾರೆ.

## ಸಿದ್ಧಾರೂಢರ ನೂತನ ಶಿಲಾಮಂದಿರ ಲೋಕಾರ್ಪಣೆ

ಗದಗ: ರೋಣ ತಾಲೂಕಿನ ಮಲ್ಲಾಪೂರ ಗ್ರಾಮದಲ್ಲಿ ಏ.21 ರಿಂದ 27 ರವರಿಗೆ ಸಿದ್ಧಾರೂಢರ ವಿವಿದೋದ್ಧೇಶಗಳ ಟ್ರಸ್ಟ್ ಕಮೀಟಿ ಸಹಯೋಗದಲ್ಲಿ ಸಿದ್ಧಾರೂಢರ ನೂತನ ಶಿಲಾಮಂದಿರ ಲೋಕಾರ್ಪಣೆ, ಮೂರ್ತಿ ಪ್ರತಿಷ್ಠಾಪನೆ, ಕಳಸಾರೋಹಣ, ಪಲ್ಲಕ್ಕಿ ಉತ್ಸವ ಹಾಗೂ ಸಾಮೂಹಿಕ ವಿವಾಹ ಮಹೋತ್ಸವ ಕಾರ್ಯಕ್ರಮ ಹಮ್ಮಿಕೊಂಡಿದೆ. ಏ.21 ರಂದು ಬೆಳಗ್ಗೆ 10ಕ್ಕೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಕುಂಭ, ಆರುತಿ, ಡೊಳ್ಳು ವಿವಿಧ ವಾದ್ಯಗಳೊಂದಿಗೆ ಸಿದ್ಧಾರೂಢರ ಮೂರ್ತಿ ಹಾಗೂ ವಿವಿಧ ಶರಣರ ಮೂರ್ತಿಗಳ ಭವ್ಯ ಮೆರವಣಿಗೆ ಹಮ್ಮಿಕೊಂಡಿದೆ. ಏ.22 ರಂದು ಸಾಯಂಕಾಲ 6ಕ್ಕೆ ಸಿದ್ಧಾರೂಢರ ಜಲವಾಸ, ದಾನ್ಯವಾಸ, ವಸ್ತ್ರವಾಸ, ಹೋಮ ಹವನದ ತಯಾರಿ ಮಾಡಲಾಗುತ್ತಿದೆ. ಏ.23 ರಂದು ಬೆಳಗ್ಗೆ 9ಕ್ಕೆ ಸಿದ್ಧಾರೂಢರ ನೂತನ ಶಿಲಾಮಂದಿರ ಲೋಕಾರ್ಪಣೆ, ಸಿದ್ಧಾರೂಢರ ಮೂರ್ತಿ ಪ್ರಾಣ ಪ್ರತಿಷ್ಠಾಪನೆ, ಸಿದ್ಧಾರೂಢರ ಗೋಪಿರ ಕಳಸಾರೋಹಣ, ವಿವಿಧ ಶರಣರ ಮೂರ್ತಿ ಪ್ರತಿಷ್ಠಾಪನೆ, ಮಲ್ಲಾಪೂರದ ಶಾಸ್ತ್ರಿಗಳಿಂದ ಹೋಮ ಪೂಜಾ ಕಾರ್ಯಕ್ರಮ ಹಮ್ಮಿಕೊಂಡಿದೆ. ಏ.24 ರಂದು ಸಂಜೆ 6ಕ್ಕೆ ಸಿದ್ಧಾರೂಢರ ಭಕ್ತರ ಪರಸ್ಪರ ಭಸ್ಮ, ಅರ್ಪಣೆ, ಪ್ರವಚನ ಕಾರ್ಯಕ್ರಮ ಹಮ್ಮಿಕೊಂಡಿದೆ. ಏ.25 ಕ್ಕೆ ಸಾಯಂಕಾಲ 6ಕ್ಕೆ ಮುತ್ತೈದೆಯರ ಭಾಗ್ಯಕ್ಕಾಗಿ ಕುಂಕುಮ ದಿನ ಕಾರ್ಯಕ್ರಮ ಮಾಡಲಾಗುತ್ತಿದೆ. ಏ.26 ರಂದು ಸಂಜೆ 6ಕ್ಕೆ ತಾಯಿಂದಿರಿಗೆ ಉಡಿ ತುಂಬುವ ಕಾರ್ಯಕ್ರಮ ಮಾಡಲಾಗುತ್ತಿದೆ. ಏ.27 ರಂದು ಬೆಳಗ್ಗೆ 9ಕ್ಕೆ ಸಾಮೂಹಿಕ ವಿವಾಹ ಮಹೋತ್ಸವ ಕಾರ್ಯಕ್ರಮ ಹಾಗೂ ಸಿದ್ಧಾರೂಢರ ಕೌದಿ ಪೂಜಾ ಕಾರ್ಯಕ್ರಮ ಹಮ್ಮಿಕೊಂಡಿದೆ. ಕಾರ್ಯಕ್ರಮದ ಸಾನ್ನಿಧ್ಯ ಫಕೀರೇಶ್ವರ ಶಿವಾಚಾರ್ಯ ಸ್ವಾಮೀಜಿ ವಹಿಸುವರು. ಅಭಿನವ ಮೃತ್ಯುಜಯ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟನೆ ಮಾಡುವರು. ಡಾ.ಶಿವಕುಮಾರ ಸ್ವಾಮೀಜಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ನೀಲಮ್ಮತಾಯಿ ಅಸುಂಡಿ, ಶಾಂತವೀರ ಶರಣರು ಭಾಗವಹಿಸುವರು. ಬಿ.ಟಿ. ರಬ್ಬನಗೌಡ್ರ, ವೀರಭದ್ರಪ್ಪ ನರಿಯವರ, ಬಸುರಡ್ಡೆಪ್ಪ ಹೂನೂರ, ರವಿ ದಾನರಡ್ಡಿ, ಅಶೋಕ ಉಗಲಾಟ, ಬಾಪುಗೌಡ ಭರಮಗೌಡ ಭಾಗವಹಿಸುವರು ಎಂದು ಸಿದ್ಧಾರೂಢರ ವಿವಿದೋದ್ಧೇಶಗಳ ಟ್ರಸ್ಟ್ ಕಮೀಟಿ ಪದಾಧಿಕಾರಿಗಳು ತಿಳಿಸಿದ್ದಾರೆ.

# ಯೋಗೇಶ್ ಗೌಡ ಹತ್ಯೆ ಪ್ರಕರಣ: Congress ಶಾಸಕ ವಿನಯ್ ಕುಲಕರ್ಣಿ ಸೇರಿ 16 ಮಂದಿಗೆ ಜೀವಾವಧಿ ಶಿಕ್ಷೆ, ಮಹತ್ವದ ತೀರ್ಪು!



**ಬೆಳಗಾವಿ ವಾರ್ತೆ ಬೆಂಗಳೂರು:** ಧಾರವಾಡ ಬಿಜೆಪಿ ನಾಯಕ ಯೋಗೇಶ್ ಗೌಡ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯ ತೀರ್ಪು ಪ್ರಕಟಿಸಿದ್ದು Congress ಶಾಸಕ ವಿನಯ್ ಕುಲಕರ್ಣಿಗೆ ಜೀವಾವಾಧಿ ಶಿಕ್ಷೆ ನೀಡಿದೆ. ಇದೇ ಪ್ರಕರಣದಲ್ಲಿ 15 ಅಪರಾಧಿಗಳಿಗೂ ಜೀವಾವಾಧಿ ಶಿಕ್ಷೆ ವಿಧಿಸಿರುವ ಕೋರ್ಟ್ 19ನೇ ಅಪರಾಧಿ ಚೆನ್ನಕೇಶವ ಟಿಂಗರಿಕರ್ ಗೆ 7 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ಕೋರ್ಟ್ ನ ನ್ಯಾಯಮೂರ್ತಿ ಸಂತೋಷ್ ಗಜಾನನ ಭಟ್ ಅವರು ಇಂದು ಮಹತ್ವದ ತೀರ್ಪು ಪ್ರಕಟಿಸಿದ್ದಾರೆ. ವಿನಯ್ ಕುಲಕರ್ಣಿ ಮತ್ತು ಇತರರಿಗೆ ಕ್ರಿಮಿನಲ್ ಪಿತೂರಿ ಮತ್ತು ಕೊಲೆ ಸೇರಿದಂತೆ ಐಪಿಸಿ ಸೆಕ್ಷನ್‌ಗಳ ಅಡಿಯಲ್ಲಿ ಶಿಕ್ಷೆ ವಿಧಿಸಿದ್ದಾರೆ. ಇದೇ ವೇಳೆ ಯೋಗೇಶ್ ಗೌಡ ಮಕ್ಕಳಿಗೆ ಪರಿಹಾರವಾಗಿ 16 ಲಕ್ಷ ರೂಪಾಯಿ ನೀಡುವಂತೆ ಕೋರ್ಟ್ ಸೂಚಿಸಿದೆ.

ವಿನಯ್ ಕುಲಕರ್ಣಿ ಕಳೆದ 3 ದಿನದಿಂದ ಒಂದೇ ಬಟ್ಟೆಯಲ್ಲಿದ್ದಾರೆ. ಬಟ್ಟೆ ಬದಲಿಸಲು ಅನುಮತಿ ನೀಡುವಂತೆ ಶಾಸಕರ ಪರ ವಕೀಲ ಸುನಿಲ್ ಮನವಿ ಮಾಡಿದ್ದರು. ಅಪರಾಧಿಗಳಿಗೆ ಬಟ್ಟೆ ಒದಗಿಸಲು ಜೈಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಜೈಲು ಕೈಪಿಡಿಯಲ್ಲಿರುವಂತೆ ಬಟ್ಟೆ ಒದಗಿಸಲು ಜಡ್ಜ್ ಸೂಚನೆ ನೀಡಿದ್ದಾರೆ. ಇದರ ಜತೆಗೆ ಪ್ರತಿ ಸೆಕ್ಷನ್‌ಗೂ ಪ್ರತ್ಯೇಕವಾಗಿ ದಂಡ ವಿಧಿಸಲಾಗಿದೆ.

2016ರ ಜೂನ್ 15ರಂದು ಧಾರವಾಡದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಯೋಗೇಶ್ ಗೌಡ ಅವರನ್ನು ಸಪ್ತಾಪುರ ಬಡಾವಣೆಯ ಜಿಮ್‌ನಲ್ಲಿ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಧಾರವಾಡದ ಉಪನಗರ ಪೊಲೀಸರು ದೂರು ದಾಖಲಿಸಿಕೊಂಡು ತನಿಖೆಯನ್ನು ನಡೆಸಿದ್ದರು. ಆಸ್ತಿ ವಿವಾದದ ವಿಚಾರಕ್ಕಾಗಿ ಈ ಕೊಲೆ ನಡೆದಿದೆ ಎಂದು ಪೊಲೀಸರು ಆರು ಜನರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಆದರೆ, ಹತ್ಯೆಯಾದ ಯೋಗೇಶ್ ಗೌಡ ಕುಟುಂಬದ ಸದಸ್ಯರ ಒತ್ತಾಯದ ಮೇರೆಗೆ 2019ರಲ್ಲಿ ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಾಗಿತ್ತು. ಬಳಿಕ ಸಿಬಿಐ ತನಿಖೆಯಲ್ಲಿ ಇದು ರಾಜಕೀಯ ಪ್ರೇರಿತ ಕೊಲೆ ಎಂದು ಹೇಳಿತ್ತು. ಅಲ್ಲಿಂದ ಈ ಪ್ರಕರಣ ರಾಜಕೀಯ ತಿರುವು ಪಡೆದುಕೊಂಡಿತ್ತು.

ಈ ಕೊಲೆಯಲ್ಲಿ ಶಾಸಕ ವಿನಯ್ ಕುಲಕರ್ಣಿ ಕೈವಾಡವಿರುವ ಅನುಮಾನ ವ್ಯಕ್ತವಾಗಿತ್ತು. 2020ರ ನವೆಂಬರ್ 5ರಂದು ಸಿಬಿಐ ಅಧಿಕಾರಿಗಳು, ವಿನಯ್ ಕುಲಕರ್ಣಿ ಅವರನ್ನು ಬಂಧಿಸಿದ್ದರು. ಈ ಪ್ರಕರಣದಲ್ಲಿ ವಿನಯ್ ಕುಲಕರ್ಣಿ ಸೇರಿ ಒಟ್ಟು 21 ಮಂದಿ ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಟ್ಟಿ ಸಲ್ಲಿಸಿದ್ದರು. ಇದರ ನಂತರ ವಿನಯ್ ಕುಲಕರ್ಣಿ ಜಾಮೀನು ಪಡೆದು ಹೊರಗೆ ಬಂದಿದ್ದರು. ನಂತರದಲ್ಲಿ ಈ ಪ್ರಕರಣವನ್ನು ಜನಪ್ರತಿನಿಧಿ ಕೋರ್ಟ್‌ಗೆ ನೀಡಲಾಗಿತ್ತು. ಇದೀಗ ಈ ಅವರಿಗೆ ಶಿಕ್ಷೆಯನ್ನು ಘೋಷಣೆ ಮಾಡಿದೆ.

# ತೃತೀಯ ಭಾಷೆಗೆ ಗ್ರೇಡ್ ಬದಲು ಅಂಕ: ಆದೇಶ ಮರುಪರಿಶೀಲಿಸುವಂತೆ ರಾಜ್ಯಸರ್ಕಾರ ಹೈಕೋರ್ಟ್ ಗೆ ಮನವಿ



**ಬೆಳಗಾವಿ ವಾರ್ತೆ ಬೆಂಗಳೂರು:** ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಿಂದಿ ಸೇರಿ ತೃತೀಯ ಭಾಷೆಗೆ ಗ್ರೇಡ್ ಬದಲಿಗೆ ಅಂಕಗಳ ನೀಡಲು ಸೂಚಿಸಿ ಹೊರಡಿಸಿರುವ ಆದೇಶವನ್ನು ಮರು ಪರಿಶೀಲಿಸುವಂತೆ ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ.

ಈ ಕುರಿತು ರಾಜ್ಯ ಸರ್ಕಾರವು ಮರು ಪರಿಶೀಲನಾ ಅರ್ಜಿ ಸಲ್ಲಿಸಿದ್ದು, ಅರ್ಜಿಯನ್ನು ತುರ್ತಾಗಿ ವಿಚಾರಣೆಗೆ ಮಾಡಬೇಕೆಂದು ರಾಜ್ಯ ಸರ್ಕಾರ ಮನವಿ ಮಾಡಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೃತೀಯ ಭಾಷೆ ಮತ್ತು ಎನ್ ಎಸ್ ಕ್ಯೂ ಎಫ್ ವಿಷಯಗಳಿಗೆ ಅಂಕದ ಬದಲು ಗ್ರೇಡ್ ನೀಡುವುದಾಗಿ ಸಚಿವ ಮಧು ಬಂಗಾರಪ್ಪ ಪರೀಕ್ಷೆ ನಡೆಯುತ್ತಿದ್ದ ಸಂದರ್ಭದಲ್ಲಿ ಪ್ರಕಟಿಸಿದ್ದರು. ಆ ಕ್ರಮ ಪ್ರಶ್ನಿಸಿ ಚಿಕ್ಕಮಗಳೂರಿನ ಸಹನಾ ಆರ್ ನಾಯ್ಕ್, ಉಡುಪಿಯ ಅನುಷಾ ಮತ್ತು ಸುದೀಕ್ಷಾ ಅವರು ಹೈಕೋರ್ಟ್ ಗೆ ತಕರಾರು ಆ ಅರ್ಜಿಯನ್ನು ಏ.15ರಂದು ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಇ.ಎಸ್. ಇಂದಿರೇಶ್ ಅವರ ಪೀಠ, 2025–26ರ ಎಸ್ ಎಸ್ ಎಲ್ ಸಿ ಪರೀಕ್ಷೆಯ ಅಧಿಸೂಚನೆ ಹೊರಡಿಸಿದ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದ ನಿಯಮದಂತೆ ಮೌಲ್ಯಮಾಪನ ನಡೆಸಬೇಕು. ಹಿಂದಿ ಸೇರಿ ತೃತೀಯ ಭಾಷೆಗಳ ವಿಷಯಗಳಿಗೆ ಗ್ರೇಡ್ ಬದಲಾಗಿ ಅಂಕ ನೀಡಬೇಕು ಎಂದು ರಾಜ್ಯ ಸರ್ಕಾರಕ್ಕೆ ಸೂಚಿಸಿತ್ತು. ಈ ಆದೇಶವನ್ನು ಪುನರ್ ಪರಿಶೀಲಿಸುವಂತೆ ಕೋರಿ ಹೈ ಕೋರ್ಟ್ ಗೆ ಸರ್ಕಾರವು ನಿನ್ನೆ ಮರು ಪರಿಶೀಲನಾ ಅರ್ಜಿ ಸಲ್ಲಿಸಿದೆ.

**ಉತ್ತರ ಪತ್ರಿಕೆ ಮೌಲ್ಯಮಾಪನ:** 2025–26 ಶೈಕ್ಷಣಿಕ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಉತ್ತರಪತ್ರಿಕೆಗಳ ಮೌಲ್ಯಮಾಪನವನ್ನು ಪರೀಕ್ಷಾ ಅಧಿಸೂಚನೆ ಹೊರಡಿಸಿದ ದಿನಾಂಕದ ವೇಳೆ ಪ್ರಚಲಿತದಲ್ಲಿದ್ದ ನಿಯಮಗಳ ಪ್ರಕಾರವೇ ನಡೆಸಲಾಗುವುದು ಎಂದು ರಾಜ್ಯ ಸರ್ಕಾರ ತಿಳಿಸಿದೆ. ಮೂರನೇ ಭಾಷೆಯ ಉತ್ತರಪತ್ರಿಕೆಗಳನ್ನು ಗ್ರೇಡಿಂಗ್ ಪದ್ಧತಿ ತರದೇ, ಅದೇ ನಿಯಮಗಳಂತೆ ಮೌಲ್ಯಮಾಪನ ಮಾಡಬೇಕು ಎಂದು ಕರ್ನಾಟಕ ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

ನ್ಯಾಯಮೂರ್ತಿ ಇ.ಎಸ್. ಇಂದಿರೇಶ್ ಅವರು ಏಪ್ರಿಲ್ 15ರಂದು ಈ ಆದೇಶ ಹೊರಡಿಸಿದರು. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಮೂರನೇ ಭಾಷೆಯ ಮೌಲ್ಯಮಾಪನದಲ್ಲಿ ಗ್ರೇಡಿಂಗ್ ವ್ಯವಸ್ಥೆ ಪರಿಚಯಿಸುವ ಬಗ್ಗೆ ನೀಡಿದ ಇತ್ತೀಚಿನ ಹೇಳಿಕೆಯಿಂದ ಆತಂಕ ವ್ಯಕ್ತಪಡಿಸಿ ಮೂವರು ವಿದ್ಯಾರ್ಥಿಗಳು ಸಲ್ಲಿಸಿದ್ದ ಅರ್ಜಿಗೆ ಸರ್ಕಾರದ ವಕೀಲರು ನೀಡಿದ ಉತ್ತರವನ್ನು ದಾಖಲಿಸಿಕೊಂಡು ಈ ಆದೇಶ ನೀಡಲಾಗಿದೆ.

ವಿಚಾರಣೆ ವೇಳೆ, ಹೆಚ್ಚುವರಿ ಸರ್ಕಾರದ ವಕೀಲರು ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮೌಲ್ಯಮಾಪನವನ್ನು ಪರೀಕ್ಷೆ ನಡೆದ ದಿನಾಂಕದ ವೇಳೆ ಪ್ರಚಲಿತದಲ್ಲಿದ್ದ ವೃತ್ತಪತ್ರಿಕೆಯ ಪ್ರಕಾರವೇ ನಡೆಸಲಾಗುತ್ತದೆ ಎಂದು ತಿಳಿಸಿದರು. ಇದನ್ನು ದಾಖಲಿಸಿಕೊಂಡ ನ್ಯಾಯಾಲಯ, 2025–26 ಶೈಕ್ಷಣಿಕ ವರ್ಷದ ಪರೀಕ್ಷಾ ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ ಅನ್ವಯವಾಗಿದ್ದ ನಿಯಮಗಳ ಪ್ರಕಾರವೇ ಇತ್ತೀಚೆಗೆ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮೌಲ್ಯಮಾಪನ ನಡೆಸಬೇಕು ಎಂದು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿತು.

# ಡಿಕೆ ಶಿವಕುಮಾರ್– ಸತೀಶ್ ಜಾರಕಿಹೊಳಿ ಭೇಟಿ: ನಗರದ ಸಂಚಾರ ದಟ್ಟಣೆ ಸುಧಾರಣೆ ಸಂಬಂಧ ಚರ್ಚೆ

**ಬೆಳಗಾವಿ ವಾರ್ತೆ ಬೆಂಗಳೂರು:** ನಗರದಲ್ಲಿ ಹದಗೆಡುತ್ತಿರುವ ಸಂಚಾರ ದಟ್ಟಣೆಗೆ ಪರಿಹಾರವನ್ನು ಕಂಡುಕೊಳ್ಳಲು, ಉಪಮುಖ್ಯಮಂತ್ರಿ ಮತ್ತು ಬೆಂಗಳೂರು ಅಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ಅವರು ಶುಕ್ರವಾರ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರೊಂದಿಗೆ ಮಾತುಕತೆ ನಡೆಸಿದರು.

ಸಭೆಯ ನಂತರ ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಿವಕುಮಾರ್, ನಗರದ ಮೂಲಕ, ವಿಶೇಷವಾಗಿ ಜನದಟ್ಟಣೆಯಿಂದ ಕೂಡಿದ ನೆಲಮಂಗಲ–ಗೊರಗುಂಟೆಪಾಳ್ಯ ಪ್ರದೇಶದಲ್ಲಿ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ಬಗ್ಗೆ ಚರ್ಚೆ ನಡೆಯಿತು ಎಂದು ಹೇಳಿದರು. ಪ್ರಸ್ತುತ ಹೆಚ್ಚಿನ ಸಂಖ್ಯೆಯ ವಾಹನಗಳು ಬೆಂಗಳೂರಿನ ಮೂಲಕ ಹಾದು ಹೋಗುತ್ತವೆ, ಇದು ನಗರದ ರಸ್ತೆಗಳ ಮೇಲಿನ ಹೊರೆಯನ್ನು ಹೆಚ್ಚಿಸುತ್ತದೆ ಎಂದು ಹೇಳಿದರು.

ನಗರಕ್ಕೆ ಅನಗತ್ಯ ಪ್ರವೇಶವನ್ನು ತಡೆಯಲು ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಮೂಲಕ ವಾಹನಗಳನ್ನು ತಿರುಗಿಸುವ ಯೋಜನೆಗಳ ಬಗ್ಗೆ ಚರ್ಚಿಸಲಾಗಿದೆ ಎಂದು ಅವರು ಹೇಳಿದರು. ನೈಸ್ ರಸ್ತೆಯನ್ನು ತಲುಪುವ ಮೊದಲು ಸಂಚಾರವನ್ನು ನಿಯಂತ್ರಿಸಲು ಸಾಧ್ಯವಿರುವ ವ್ಯವಸ್ಥೆಗಳನ್ನು ಸಹ ಸಚಿವರು



ಪರಿಶೀಲಿಸಿದರು. ಸರ್ಕಾರವು ಈಗಾಗಲೇ ಬೆಂಗಳೂರು ವ್ಯಾಪಾರ ಕಾರಿಡಾರ್ ಯೋಜನೆಯನ್ನು ಕೈಗೆತ್ತಿಕೊಂಡಿದೆ, ಇದು ಸಂಚಾರವನ್ನು ಸುಗಮಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸುವ ನಿರೀಕ್ಷೆಯಿದೆ ಎಂದು ಶಿವಕುಮಾರ್ ಹೇಳಿದರು.

# ಚಿನ್ನದ ಪದಕ ಪಡೆದ ಚೇತನ ಶಾಲೆಯ ವಿದ್ಯಾರ್ಥಿ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಎಚ್,ಪಿ, ಎಸ್, ಚೇತನ ಶಾಲೆಯ ವಿದ್ಯಾರ್ಥಿಯಾದ ಶಿವಕುಮಾರ್ ತಿಮಸಾಗರ್ ಎಂಬ ವಿದ್ಯಾರ್ಥಿಯು ಯೂತ್ ಗೇಮ್ ಕೌನ್ಸಿಲ್ ಇಂಡಿಯಾ ವತಿಯಿಂದ ಆಯೋಜಿಸಲಾದ 5 ನೇ ನ್ಯಾಷನಲ್ ಯೂತ್ ಗೇಮ್ 2026 ಕ್ರಿಕೆಟ್ ಆಟದಲ್ಲಿ ಬಾಗವಹಿಸಿ ಬೆಸ್ಟ್ ಬ್ಯಾಟರ್ ಎಂದು ಆಯ್ಕೆಯಾಗಿ ಟ್ರೋಫಿ ಮತ್ತು ಬಂಗಾರದ ಪದಕವನ್ನು ಪಡೆದುಕೊಂಡಿದ್ದು ಚೇತನ್ ಶಾಲೆಗೆ ಹೆಮ್ಮೆಯ ವಿಷವಾಗಿದೆ.

ಶಿವಕುಮಾರ್ ಬಾಗಲಕೋಟ ಜಿಲ್ಲೆಯ ಸುತ್ತುಗುಂಡೂರ್ ಎಂಬ ಗ್ರಾಮದ ಬಾಲಕನ್ನಾಗಿದ್ದು ಇವನು ಮುದ್ದೇಬಿಹಾಳದ ಚೇತನ್ ಎಚ್ ಪಿ ಎಸ್ ಶಾಲೆಯಲ್ಲಿ 7 ನೇ ತರಗತಿ ವ್ಯಾಸಂಗ ಮಾಡುತ್ತಿದ್ದೂ ಗೋವಾ ರಾಜ್ಯದ ಮಾಪಸಾದಲ್ಲಿ ಜನವರಿಯಲ್ಲಿ ನಡೆದ 10 ವೊವರ್ ಗಳ ಪಂದ್ಯಾವಳಿಯಲ್ಲಿ ಓಪನರ ಬ್ಯಾಟ್ ಮ್ಯಾನ್ ಆಗಿ ಆಡಿ, 26.32 ಮತ್ತು 51 ರನ್ನಗಳನ್ನು ಗಳಿಸಿದ್ದಾನೆ, ಮಾರ್ಚ್



ತಿಂಗಳಲ್ಲಿ ನೇಪಾಳ ದಲ್ಲಿ ನಡೆಯುವ ಕ್ರಿಕೆಟ್ ಪಂದ್ಯಾವಳಿಗೂ ಆಯ್ಕೆಯಾಗಿದ್ದಾನೆ. ಚೇತನ್ ಎಚ್ ಪಿ ಎಸ್ ಶಾಲೆಯ ದೈಹಿಕ ಶಿಕ್ಷಕರಾದ ಎಸ್ ಎಚ್ ತಳವಾರ ಹಾಗೂ ಮುಖ್ಯ ಗುರುಗಳಾದ ಎಸ್ ಎಸ್ ಪೂಜಾರಿ ಮತ್ತು ಸಹ ಶಿಕ್ಷಕರು ಅಭಿನಂದನೆಗಳನ್ನು ತಿಳಿಸಿದ್ದಾರೆ.

# ಪಿಯುಸಿಯಲ್ಲಿ ರಾಜ್ಯಕ್ಕೆ ಏಳನೇ ರ್‍ಯಾಂಕ್

## ಹಲವು ಸಮಸ್ಯೆ ನಡುವೆ ಯಶಸ್ಸು ಕಂಡ ಸಾಧಕರ ಸನ್ಮಾನ



ಮೋಳೆ: ಕಾಗವಾಡ ತಾಲೂಕಿನ ಉಗಾರ ಬಿಕೆ ಗ್ರಾಮದ ಶ್ರೀ ಪದ್ಮಾವತಿ ಶಿಕ್ಷಣ ಸಂಸ್ಥೆಯಲ್ಲಿ ಪಿಯುಸಿಯಲ್ಲಿ ರಾಜ್ಯಕ್ಕೆ 7 ನೇ ರ್‍ಯಾಂಕ್ ಪಡೆದ ವಿರ್ದಯಾರ್ಥಿನಿ ನಮೃತಾ ಚ್ವಘುಲೆ ಹಾಗೂ ಟಾಪರಗಳನ್ನು ಶೀತಲಗೌಡ ಪಾಟೀಲ ಸನ್ಮಾನಿಸುತ್ತಿರುವ ಚಿತ್ರ.

**ಬೆಳಗಾವಿ ವಾರ್ತೆ ಮೋಳೆ:** ದುಡ್ಡಿದ್ದವರಷ್ಟೇ ಸಾಧನೆ ಮಾಡಬಹುದೆಂಬ ಮಾತು ಪ್ರಸ್ತುತ ಮಾತು ಸುಳ್ಳಾಗಿದೆ. ಪ್ರತಿಭೆ ಮತ್ತು ಕಠಿಣ ಪರಿಶ್ರಮ ಇದ್ದವರಿಂದಲೂ ಸಾಧನೆ ಸಾಧ್ಯ . ಇದಕ್ಕೆ ನಮ್ಮ ಸಂಸ್ಥೆಯ ಪ್ರತಿಭಾವಂತ ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯೇ ಸಾಕಿಯಾಗಿದೆ ಎಂದು ಪದ್ಮಾವತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಶೀತಲಗೌಡ ಪಾಟೀಲ ಹೇಳಿದರು.

ಅವರು ಇಂದು ಭಾರತ ರತ್ನ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ ಜಯಂತಿಯ ನಿಮಿತ್ಯ ಕಾಗವಾಡ ತಾಲೂಕಿನ ಉಗಾರ ಬಿಕೆ ಗ್ರಾಮದ ಶ್ರೀ ಪದ್ಮಾವತಿ ಶಿಕ್ಷಣ ಸಂಸ್ಥೆಯಲ್ಲಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ತಮ್ಮ ಸಂಸ್ಥೆಯಲ್ಲಿ ಅಧ್ಯಯನ ಮಾಡಿ ಪಿಯುಸಿಯಲ್ಲಿ ರಾಜ್ಯ ಮಟ್ಟದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಮಾತನಾಡುತ್ತಿದ್ದರು.

ಬಡತನಕ್ಕೂ ಸಾಧನೆಗೂ ಸಂಬಂಧವಿಲ್ಲ, ಪ್ರತಿಭೆ ಮತ್ತು ಪ್ರತಿಭಾವಂತಿಕೆಗೆ ಯಾವುದೇ ಜಾತಿ,ಮತ, ಬಡತನ, ಸಿರಿವಂತಿಕೆ ಅಡ್ಡಿ ಬರುವುದಿಲ್ಲ. ಗ್ರಾಮೀಣ ಭಾಗದಲ್ಲಿದ್ದುಕೊಂಡು ಹಲವು ಸಮಸ್ಯೆಗಳ ನಡುವೆ ಹೋರಾಡಿ ಯಶಸ್ಸಿನ ಶೀಖರ ಏರಲು ಸಾಧ್ಯ ಎಂಬ ಧ್ಯೇಯೋಕ್ತಿಯನ್ನು ನಿರುಪಿಸಿದ 9ಜನ ವಿದ್ಯಾರ್ಥಿಗಳು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕಗಳನ್ನು ತೆಗೆದುಕೊಳ್ಳುವುದರ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ.

ಪದ್ಮಾವತಿ ಶಿಕ್ಷಣ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿಯವರೆ ಓದಿ ಈಗ ಪಿಯುಸಿಯಲ್ಲಿ ನಮೃತಾ ಪದ್ಮಣ್ಣ ಚೌಗುಲೆ 600ಕ್ಕೆ 592 ಅಂಕಗಳನ್ನು ಪಡೆದು ರಾಜ್ಯಕ್ಕೆ ಏಳನೇ ಸ್ಥಾನ ಗಿಟ್ಟಿಸಿಕೊಂಡಿದ್ದಾಳೆ. ಈ ವಿಧ್ಯಾರ್ಥಿನಿಯ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಶೀತಲಗೌಡ ಪಾಟೀಲ, ಮುಖ್ಯೋಪಾಧ್ಯಾಯ ರಾವಸಾಹೇಬ ಹೊನಮಾರೆಆಢಳಿತ ಮಂಡಳಿ, ಶಿಬ್ಬಂದಿ ವರ್ಗದವರು ಸನ್ಮಾನಿಸಿದರು.

ಇದೇ ಪ್ರಕಾರ 9 ವಿದ್ಯಾರ್ಥಿಗಳು ಶೇ.90ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದುಕೊಂಡಿದ್ದಾರೆ.ಇವರ ಸಾಧನೆಗೆ ಕಂಡು ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಈ ವೇಳೆ ಅಣ್ಣಾಸಾಹೇಬ ನಂದಗಾಂವೆ, ದೀಪಕ ಪಾಟೀಲ, ಅಕ್ಷಯಕುಮಾರ ಉಪಾಧ್ಯೆ, ಶಾಂತಿನಾಥ ವಸವಾಡೆ,ಸೇರಿದಂತೆ ಆಡಳಿತ ಮಂಡಳಿ, ಶಿಕ್ಷಕ ವೃಂದ ಹಾಗೂ ಪಾಲಕರು ಇದ್ದರು

# ಪೌರಕಾರ್ಮಿಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ವಿಜಯನಗರ (ಹೊಸಪೇಟೆ):** ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಒಟ್ಟು 132 ಪೌರಕಾರ್ಮಿಕರ ಹುದ್ದೆ ಮಂಜೂರಾಗಿದ್ದು, ಈ ಪೈಕಿ ಹೊಸಪೇಟೆ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿ ಇರುವ 3 ಪೌರಕಾರ್ಮಿಕರ ಹುದ್ದೆಗಳಿಗೆ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರ ಪಾವತಿ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಏಪ್ರಿಲ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.


ನಗರ ಸಭೆಗಳಲ್ಲಿ ಹಾಲಿ ನೇರ ಪಾವತಿ ಅಥವಾ ಕ್ಷೇಮಾಭಿವೃದ್ಧಿ, ದಿನಗೂಲಿ ಆಧಾರದಡಿ ಎರಡು 2 ವರ್ಷಗಳಿಗೆ ಕಡಿಮೆ ಇಲ್ಲದಂತೆ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಪ್ರಾಥಮಾದ್ಯತೆ ನೀಡಲಾಗುತ್ತದೆ. ಎರಡು ವರ್ಷಗಳಿಗೆ ಕಡಿಮೆ ಇಲ್ಲದಂತೆ ನಿರಂತರವಾಗಿ ಕೆಲಸ ನಿರ್ವಹಿಸಿರುವ ಪೌರಕಾರ್ಮಿಕರು ಎರಡು ವರ್ಷಗಳಿಗೆ ಮೇಲ್ಪಟ್ಟು ಪಾಲಿಕೆಯಲ್ಲಿ ವೇತನ ಪಡೆದ ದಾಖಲೆಗಳನ್ನು ನೇಮಕಾತಿಯಲ್ಲಿ ಆದ್ಯತೆಗೆ ಪರಿಗಣಿಸಲಾಗುತ್ತದೆ. ಆದ್ಯತೆಯನ್ನು ನೀಡುವಲ್ಲಿ ಎರಡು ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳ ಜ್ಯೇಷ್ಠತೆಯ ಆಧಾರದಲ್ಲಿ ಅವರ ವಯಸ್ಸಿನ ಅನುಗುಣವಾಗಿ ಅಂದರೆ ವಯಸ್ಸಿನಲ್ಲಿ ಹಿರಿಯರನ್ನು ಪರಿಗಣಿಸಲಾಗುತ್ತದೆ.

ಒಂದು ವೇಳೆ ಹುಟ್ಟಿದ ದಿನಾಂಕ ಮತ್ತು ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ ಪರಿಗಣಿಸಲಾಗುತ್ತದೆ. ಖಾಲಿ ಹುದ್ದೆಗಳಿಗೆ ಭರ್ತಿ ಮಾಡಿದ ನಂತರ ನೇರಪಾವತಿ ಅಡಿ ಮಂಜೂರಾದ ಹುದ್ದೆಗಳು ತಂತಾನೆ ರದ್ದಾಗುತ್ತವೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# “ಅಂಚೆಗೆ ಹೋಗದ ಪತ್ರ” ಚಿತ್ರದ ‘ಕಣ್ಣಂಚಲೇ ಪ್ರೀತಿ’ ಹಾಡು ಬಿಡುಗಡೆ

**ಬೆಳಗಾವಿ ವಾರ್ತೆ ಬೆಳಗಾವಿ :** ನವಗ್ರಹ ಮತ್ತು ವರ್ಚಸ್ ಸಹಯೋಗದಲ್ಲಿ ಬೆಳಗಾವಿ ಹುಡುಗರ “ಅಂಚೆಗೆ ಹೋಗದ ಪತ್ರ” ಚಿತ್ರದ ಎರಡನೇ ಹಾಡು “ಕಣ್ಣಂಚಲೇ ಪ್ರೀತಿ ಶುರುವಾಯಿತು ” ಬಿಡುಗಡೆಯಾಗಿ ಇದೀಗ ಯೂಟ್ಯೂಬ್ ನಲ್ಲಿ ಭರ್ಜರಿ ಸದ್ದು ಮಾಡುತ್ತಿದೆ.

ಈ ಹಾಡಿಗೆ ಖ್ಯಾತ ಗಾಯಕ ಪಂಚಮ ಜೀವ ಧ್ವನಿಯಾಗಿದ್ದು, ಎಸ್.ಕೆ.ಎಸ್ ಅವರ ಸಾಹಿತ್ಯ ಹಾಡಿನ ಭಾವವನ್ನು ಮತ್ತಷ್ಟು ಮನಮುಟ್ಟುವಂತೆ ಮಾಡಿದೆ. ಸಂಪೂರ್ಣ ಉತ್ತರ ಕರ್ನಾಟಕದ ಪ್ರತಿಭೆಗಳ ಒಕ್ಕೂಟದಲ್ಲಿ ನಿರ್ಮಾಣವಾಗಿರುವ , ಉತ್ತರ ಕರ್ನಾಟಕದಲ್ಲೇ ಸಂಪೂರ್ಣ ಚಿತ್ರೀಕರಣವಾದ ಈ ಚಿತ್ರದಲ್ಲಿ ಪ್ರವೀಣ ಸುತಾರ ನಾಯಕನಾಗಿ ಮತ್ತು ನಿರ್ದೇಶನದ ಜವಾಬ್ದಾರಿಯನ್ನೂ ಹೊತ್ತಿದ್ದಾರೆ. ನಾಯಕಿಯಾಗಿ ಸಹನಾ ಪ್ರಕಾಶ ಜೊತೆಗೆ “ರಕ್ಕಸಪುರದೊಳ” ಖ್ಯಾತಿಯ ಸೌಮ್ಯ ಅಮರಪೂರಕರ್ ಮತ್ತು “ಮಹಾನಟಿ ರನ್ನರ್ ಅಫ್” ವರ್ಷಾ ದಿಗ್ರೇಜೆ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಚಿತ್ರಕ್ಕೆ ದಿವಾಕರ ಎಂ ಅವರ ಸಂಗೀತ , ಮಂಜು ಬಸವರಾಜ ಛಾಯಾಗ್ರಹಣ, ಸಂಕಲನ ಶಿವ ಗಂಗಾಧರ ರಂಜಿತ ಪಾಂಡೆ ವಿ.ಎಫ್.ಎಕ್ಸ್ , ಪತ್ರಿಕಾ ಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ನಿರ್ವಹಿಸಿದ್ದು, ಸಹ ನಿರ್ದೇಶಕರಾಗಿ ವೀಣಾ ಮತ್ತು ವಿಶಾಲ ಕೆಲಸ ಮಾಡಿದ್ದು, ಪ್ರವೀಣ ತಾನಾಜಿ ಸುತಾರ, ಮಂಜುನಾಥ ಹುಲಮನಿ, ವರ್ಚಸ್ ಮತ್ತು ಪರದಿಶೆ ನಿರ್ಮಾಪಕರಾಗಿದ್ದಾರೆ. ಚಿತ್ರದ ಎಲ್ಲ ಕಾರ್ಯಗಳೂ ಮುಗಿದು ಬಿಡುಗಡೆಗೆ



ಸಿದ್ದವಾಗಿದ್ದು, ಮೇ ತಿಂಗಳ ಕೊನೆ ವಾರದಲ್ಲಿ ಚಿತ್ರವನ್ನು ಬಿಡುಗಡೆ ಮಾಡುವದಾಗಿ ನಿರ್ದೇಶಕ ಪ್ರವೀಣ ಸುತಾರ ತಿಳಿಸಿದ್ದಾರೆ.

**–ಡಾ.ಪ್ರಭು ಗಂಜಿಹಾಳ**
**ಮೊ–9448775346**

# ನಿವೃತ್ತ ನೌಕರರ ಸಂಘದ ಕಾರ್ಯ ಸಮಾಜಕ್ಕೆ ಕೊಡುಗೆ: ರಾಹುಲ್ ಜಾರಕಿಹೊಳಿ



**ಬೆಳಗಾವಿ ವಾರ್ತೆ ಗೋಕಾಕ:** ಕರ್ನಾಟಕ ರಾಜ್ಯ ಸರ್ಕಾರ ನಿವೃತ್ತ ನೌಕರರ ಸಂಘವು ಉಚಿತವಾಗಿ ಆರೋಗ್ಯ ತಪಾಸಣೆ ಶಿಬಿರ ಏರ್ಪಡಿಸಿ ಸೇವೆ ಸಲ್ಲಿಸುತ್ತಿರುವ ನೀವು ಸಮಾಜಕ್ಕೆ ಕೊಡುಗೆಯಾಗಿದ್ದೀರಿ ಎಂದು ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಾಹುಲ್ ಜಾರಕಿಹೊಳಿ ಹೇಳಿದರು.

ಗೋಕಾಕದ ಸಮುದಾಯ ಭವನದಲ್ಲಿ ಏರ್ಪಡಿಸಿದ್ದ ಕರ್ನಾಟಕ ರಾಜ್ಯ ಸರ್ಕಾರ ನಿವೃತ್ತ ನೌಕರರ ಸಂಘದ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ನಿವೃತ್ತ ನೌಕರರು ಮನೆಯಲ್ಲಿ ಕುಳಿತುಕೊಳ್ಳದೇ ಸಮಾಜಕ್ಕೆ ಅವಶ್ಯಕೆ ಇರುವ ಕೊಡುಗೆಗಳನ್ನು ನೀಡುತ್ತ ಬಂದಿರುತ್ತಿರಿ. ಸಮಾಜದ ಆರೋಗ್ಯ ರಕ್ಷಿಸಲು ಮುಂದಾಗಿರುವುದು ಸಂತಸದ ವಿಷಯವಾಗಿದೆ. ಇನ್ನು ಹೆಚ್ಚಿನ ಸೇವೆ ಸಲ್ಲಿಸಲು ಸಂಘಕ್ಕೆ ಸದಸ್ಯರನ್ನು ನೋಂದಾಯಿಸಿ ಸಂಘಟಿತರಾಗಬೇಕು. ಹಾಗೇಯೇ ಈ ಇಳಿವಯಸ್ಸಿನಲ್ಲಿ ತಮ್ಮ ಆರೋಗ್ಯದ ಕಡೆಗೂ ಹೆಚ್ಚಿನ ಗಮನಹರಿಸಬೇಕು. ಯುವ ಜನತೆಗೆ ಮಾದರಿಯಾಗಿ ಬದುಕಬೇಕು ಎಂದು ಹೇಳಿದರು.

ಶಿಕ್ಷಣ ಇಲಾಖೆ ಸಹ ನಿರ್ದೇಶಕ ನಿವೃತ್ತ ಗಜಾನನ ಮನ್ನಿಕೇರಿ ಮಾತನಾಡಿ, ಸಂಘದ ಧ್ಯೇಯ ಧೋರಣೆಗಳ ಬಗ್ಗೆ ವಿವರವಾಗಿ ತಿಳಿಸಿದರು.

ಕಾರ್ಮಿಕ ಧುರೀಣ ಅಂಬಿರಾವ ಪಾಟೀಲರು 80 ವರ್ಷ ತುಂಬಿದ ಮತ್ತು ಹಿರಿಯರಿಗೆ ಶಾಲು ಹೊದಿಸಿ ನೂರಾರು ವರ್ಷ ಬಾಳಿರಿ ಎಂದು ಅವರೆಲ್ಲರ ಆಶಿರ್ವಾದ ಪಡೆದರು .

ಕರ್ನಾಟಕ ರಾಜ್ಯ ಸರ್ಕಾರ ನಿವೃತ್ತ ನೌಕರರ ಸಂಘದ ಬೆಳಗಾವಿ ಜಿಲ್ಲೆಯ ಅಧ್ಯಕ್ಷರಾದ ಎಸ್.ಜಿ. ಸಿದ್ನಾಳ ಮಾತನಾಡಿ, ನಿವೃತ್ತ ನೌಕರರಿಗೆ ಮುಂದೆ ಡಿಎ ಕೊಡುವುದಿಲ್ಲ ವೇತನ ಆಯೋಗದ ಶಿಫಾರಸಿನ ಆರ್ಥಿಕ ಲಾಭ ನೀಡುವುದಿಲ್ಲ ಎಂದು ಆರ್ಥಿಕ ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿ ಮಂಡನೆ ಮಾಡಿದ್ದಾರೆ. ಅದರ ಸಲುವಾಗಿ ಅಖಿಲ ಭಾರತ ಸರ್ಕಾರ ನಿವೃತ್ತ ನೌಕರರ ಒಕ್ಕೂಟದ ಮತ್ತು ರಾಜ್ಯ ಸಂಘದ ಆದೇಶದಂತೆ 25/03/26. ರಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಜಿಯವರಿಗೆ ರಾಜ್ಯದ ತುಂಬಾ ಮನವಿ ಸಲ್ಲಿಸಿದ್ದಾರೆ ಅದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ.

ಈ ವಿಷಯದಲ್ಲಿ ಡಿ ಎಸ್ ನಕ್ಕರೆಯವರು 10 ವರ್ಷಗಳ ಹೋರಾಟ ಮಾಡಿ ನೀವು ನೀಡುತ್ತಿರುವದು ಬಿಕ್ಷೆಯಲ್ಲ ಅದು ನಮ್ಮ ಹಕ್ಕು ಅಂತಾ ಪ್ರತಿಪಾದನೆ ಮಾಡಿ 1982 ಡಿಸೆಂಬರ್ 17 ರಂದು ಆಗಿನ ಸುಪ್ರೀಂ ಕೋರ್ಟ್ ಜಡ್ಜ್ ಆಗಿದ್ದ ಶ್ರೀ ಚಂದ್ರಚೂಡ್ ಅವರು ನೀವು ನೀಡುತ್ತಿರುವದು ಬಿಕ್ಷೆಯಲ್ಲ ಅದು ಅವರ ಹಕ್ಕು ಅಂತಾ ತಿಳಿಸಿದರು 7ನೇಯ ವೇತನ ಆಯೋಗದ ಶಿಫಾರಸಿನಂತೆ 70 75ವರ್ಷದವರಿಗೆ 10%,15% ಹೆಚ್ಚಿನ ಪಿಂಚಣಿ ನೀಡುವಂತೆ, ಕಮೂಟೇಶನ 12 ವರ್ಷಕ್ಕೆ ಮಾಡಿದರೂ ಸರಕಾರ ನೀಡದೇ ಯಿರುವುದು ವಿಷದನೀಯವಾಗಿದೆ ಸಂಧ್ಯಾ ಸುರಕ್ಷಾ ಯೋಜನೆ ರೂಪಿಸಿದ್ದು 70 75ವರ್ಷದವರಿಗೆ, ಹೆಚ್ಚಿನವರಿಗೆ ಆಯುಷ್ಮಾಣ ವಂದನಾ ಯೋಜನೆಯಲ್ಲಿ ಕರ್ನಾಟಕ ರಾಜ್ಯ ಯೋಜನಾ ಅಡಿಯಲ್ಲಿ ಆದೇಶವಾಗುವ ಹಂತದಲ್ಲಿದೆ ಅದಕ್ಕೆ ಕಾರ್ಡ್ ಮಾಡಿಸಲು ತಿಳಿಸಿ ಅದರಲ್ಲಿ 5 ಲಕ್ಷದವರೆಗೆ ಉಚಿತವಾಗಿ ಸರ್ಕಾರಿ , ಖಾಸಗಿ ಆಸ್ಪತ್ರೆಗಳಲ್ಲಿ ನೀಡಲು ಇರುವುದು ಆದ್ದರಿಂದ ನಾವೆಲ್ಲರೂ ಒಗ್ಗಟ್ಟಾಗಿ ಹೋರಾಡಬೇಕು ಎಂದು ತಿಳಿಸಿದರು.

ಜುಲೈ 1ರಿಂದ 22 ಜುಲೈ 31 24ರವರೆಗೆ ನಿವೃತ್ತಿಯಾದ ನೌಕರರಿಗೆ ಅನ್ಯಾಯವಾಗಿದೆ ಅವರ ಹೋರಾಟಕ್ಕೆ ಜಿಲ್ಲಾ ಸಂಘ ಸಂಪೂರ್ಣ ಬೆಂಬಲ ಇದೆ ಎಂದು ತಿಳಿಸಿದರು.

ಅಧ್ಯಕ್ಷತೆಯನ್ನು ಕೆ.ಡಿ.ವಾಲಿಕಾರ ವಹಿಸಿದ್ದರು. ನಿವೃತ್ತ ಡಿಡಿಪಿಐ ಜಿ.ಬಿ.ಮನ್ನಿಕೇರಿ, ನಿವೃತ್ತ ಬಿಇಓ ಎ.ಎಸ್.ಜೋಡಗೇರಿ, ನಿವೃತ್ತ ಶಿಕ್ಷಕ ಎಂ.ಬಿ.ಅತ್ತಾರ, ನಿವೃತ್ತ ಸಿಡಿಪಿಒ ಎಸ್.ಎಮ್.ಹಂಜಿ . ನಿವೃತ್ತ ಡಿಎಚ್ಓ ಡಾ:ಅಶೋಕ ಮುರಗೋಡ ಸೇರಿದಂತೆ ಅನೇಕ ಹಿರಿಯರು ಇದ್ದರು.

ಖಜಾಂಚಿ ದೊಡಮನಿ ಸ್ವಾಗತಿಸಿದರು, ಕಾರ್ಯದರ್ಶಿ ಕಡಿಯವರು ನಿರೂಪಣೆ ಮಾಡಿದರು. ಸಂಘದ ಎಲ್ಲಾ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು ನಂತರ ಕಡಿಯವರು ವಂದಿಸಿದರು

# ಕರ್ನಾಟಕದಲ್ಲಿ ಆಟೋ, ಕ್ಯಾಬ್ ಚಾಲಕರಿಗೆ ಕನ್ನಡ ಭಾಷೆ ಕಡ್ಡಾಯಗೊಳಿಸಿ

**ಬೆಳಗಾವಿ ವಾರ್ತೆ ಬೆಂಗಳೂರು:** ಮಹಾರಾಷ್ಟ್ರ ಸರ್ಕಾರ ಇತ್ತೀಚೆಗೆ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಮರಾಠಿ ಭಾಷೆಯಲ್ಲಿ ಪರಿಣತಿ ಕಡ್ಡಾಯಗೊಳಿಸಿರುವ ಕ್ರಮವನ್ನು ಉಲ್ಲೇಖಿಸಿ, ಕೆಪಿಸಿಸಿ ವಕ್ತಾರ ಎ.ಎನ್. ನಟರಾಜ್ ಗೌಡ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕರ್ನಾಟಕದಲ್ಲೂ ಇದೇ ರೀತಿಯ ನೀತಿಯನ್ನು ಜಾರಿಗೊಳಿಸುವಂತೆ ಮನವಿ ಮಾಡಿದ್ದಾರೆ.



ಮುಖ್ಯಮಂತ್ರಿಗೆ ಬರೆದ ಪತ್ರದಲ್ಲಿ, ಮಹಾರಾಷ್ಟ್ರದಲ್ಲಿ ಮೇ 1ರಿಂದ ಎಲ್ಲಾ ವಾಣಿಜ್ಯ ವಾಹನ ಚಾಲಕರು ಪರವಾನಗಿ ಪಡೆಯಲು ಸ್ಥಳೀಯ ಭಾಷೆ ಮರಾಠಿ ಓದಲು, ಬರೆಯಲು ಮತ್ತು ಮಾತನಾಡಲು ತಿಳಿದಿರಬೇಕು ಎಂಬ ಆ ರಾಜ್ಯದ ಮಾದರಿಯನ್ನು ಅನುಸರಿಸುವಂತೆ ಅವರು ಸೂಚಿಸಿದ್ದಾರೆ.

ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ನಗರಗಳಲ್ಲಿ ರಾಜ್ಯದ ಹೊರಗಿನ ಆಟೋ ಮತ್ತು ಕ್ಯಾಬ್ ಚಾಲಕರ ಸಂಖ್ಯೆ ವೇಗವಾಗಿ ಹೆಚ್ಚುತ್ತಿದೆ. ಅವರು ಕನ್ನಡ ಮಾತನಾಡದ ಕಾರಣ, ಸ್ಥಳೀಯ ಕನ್ನಡಿಗರು ತಮ್ಮದೇ ರಾಜ್ಯದಲ್ಲಿ ಸಂವಹನ ನಡೆಸಲು ಕಷ್ಟಪಡುತ್ತಿದ್ದಾರೆ ಎಂದು ಅವರು ಹೇಳಿದ್ದಾರೆ. ಕ್ಯಾಬ್‌ಗಳಲ್ಲಿ ಭಾಷಾ ಸಮಸ್ಯೆಯಿಂದ ಕನ್ನಡಿಗರು ಹಿಂಸೆ ಎದುರಿಸುತ್ತಿರುವ ಘಟನೆಗಳು ಹೆಚ್ಚುತ್ತಿರುವ ಬಗ್ಗೆ ಅವರು ಆತಂಕ ವ್ಯಕ್ತಪಡಿಸಿದರು.

ಕನ್ನಡ ಕಲಿಯಲು ನಿರಾಕರಿಸುವ ವಾಹನ ಚಾಲಕರ ವಾಣಿಜ್ಯ ಪರವಾನಗಿಯನ್ನು ಅಮಾನತು ಮಾಡುವುದು ಅಥವಾ ರದ್ದುಪಡಿಸುವ ನಿಯಮಗಳನ್ನು ರೂಪಿಸಬೇಕು. ಭಾಷಾ ನಿಯಮಗಳನ್ನು ಉಲ್ಲಂಘಿಸಿ ಭ್ರಷ್ಟಾಚಾರದ ಮೂಲಕ ಪರವಾನಗಿ ನೀಡುವ ಸಾರಿಗೆ ಅಧಿಕಾರಿಗಳ ವಿರುದ್ಧ ಕಠಿಣ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಕರ್ನಾಟಕದಲ್ಲಿ ಜೀವನೋಪಾಯ ಸಂಪಾದಿಸುವ ಪ್ರತಿಯೊಬ್ಬರ ಕರ್ತವ್ಯವೇ ಈ ನೆಲ, ನೀರು ಮತ್ತು ಭಾಷೆಯನ್ನು ಕಲಿತು ಗೌರವಿಸುವುದು ಎಂದು ಅವರು ತಿಳಿಸಿದ್ದಾರೆ.

ಮಹಾರಾಷ್ಟ್ರ ಸರ್ಕಾರ ಈಗಾಗಲೇ ಪ್ರಾದೇಶಿಕ ಸಾರಿಗೆ ಕಚೇರಿಗಳಲ್ಲಿ (ಖಖಿಔ) ಚಾಲಕರಿಗೆ ಹೆಸರು ಫಲಕಗಳನ್ನು ಓದಲು ಹಾಗೂ ಮೂಲಭೂತ ಸಂಭಾಷಣೆ ನಡೆಸುವ ಸಾಮರ್ಥ್ಯದ ಪರೀಕ್ಷೆಗಳನ್ನು ಆರಂಭಿಸಿದೆ. ಕನ್ನಡಿಗರ ಸ್ವಾಭಿಮಾನ ಮತ್ತು ಹಿತಾಸಕ್ತಿಗಳನ್ನು ಕಾಪಾಡಲು ಇದೇ ರೀತಿಯ ಧೈರ್ಯಶಾಲಿ ನಿರ್ಧಾರವನ್ನು ಜಾರಿಗೊಳಿಸುವುದು ಅಗತ್ಯವೆಂದು ನಟರಾಜ್ ಗೌಡ ಅಭಿಪ್ರಾಯಪಟ್ಟರು.

# ಮಾನವನ ಅಜ್ಞಾನ, ಅಂಧಕಾರವನ್ನು ಗುರುವಿನಲ್ಲಿ ಹೋಗಲಾಡಿಸಲು ಮಾತ್ರ ಸಾಧ್ಯ, ಅಂತಹ ಗುರುವನ್ನು ಪಡೆದು ಸುಖಮಯ ಜೀವನ ಸಾಗಿಸಿ

**ಬೆಳಗಾವಿ ವಾರ್ತೆ ಉಗರಗೋಳ:** ಮಾನವನ ಅಜ್ಞಾನ, ಅಂಧಕಾರವನ್ನು ಗುರುವಿನಲ್ಲಿ ಹೋಗಲಾಡಿಸಲು ಮಾತ್ರ ಸಾಧ್ಯ, ಅಂತಹ ಗುರುವನ್ನು ಪಡೆದು ಸುಖಮಯ ಜೀವನ ಸಾಗಿಸಿ ಎಂದು ಸಮಾಜ ಮುಖಂಡ ಮಡಿವಾಳಪ್ಪ ಬಿದರಗಡ್ಡಿ ಹೇಳಿದರು

ಸವದತ್ತಿ ತಾಲೂಕಿನ ಉಗರಗೋಳ ಗ್ರಾಮದಲ್ಲಿ ಶನಿವಾರ ರಂದು ಶ್ರೀಭೀರಲಿಂಗೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಗ್ರಾಮದಲ್ಲಿ ಶ್ರೀಭಿರಲಿಂಗೇಶ್ವರರ ಪಲ್ಲಕ್ಕಿಗಳ ಉತ್ಸವವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು ಯುವಕರು ಮೊಬೈಲ್, ಟಿವಿ ನೋಡುವುದರಲ್ಲೇ ದಿನಗಳೆಯದೇ ದೇಶಾಭಿಮಾನ ಬೆಳೆಸಿಕೊಂಡು ಸದೃಢ ಭಾರತ ಕಟ್ಟಲು ಮುಂದಾಗಿ. ರೈತನ ಬಾಳು ಸಂಪದ್ಭರಿತವಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಲಾಯಿತು ಎಂದರು.

ಧಾರವಾಡ ಶ್ರೀಬೀರಲಿಂಗೇಶ್ವರ ಡೊಳ್ಳು ಕುಣಿತ ಜಾತ್ರಾ ಮಹೋತ್ಸವಕ್ಕೆ ರಂಗು ತಂದಿತ್ತು. ಗುಡಮಕೇರಿಯ ಮಲಕಾರಿಶಿದ್ದೇಶ್ವರ ಗಾಯನ ಸಂಘ ಹಾಗೂ ನಿಡಗುಂದಿ ಶ್ರೀರೇಣುಕಾ ದೇವಿ ಗಾಯನ ಸಂಘದಿಂದ ಜಿದ್ದಾಜಿದ್ದಿನ ಡೋಳ್ಳಿನ ಪದಗಳು ಜರಗಿದವು

ಉಗರಗೋಳ ಭೀರದೇವರ ಪಲ್ಲಕ್ಕಿ ಹಾಗೂ ಚುಳಕಿ, ಸಿಂಗಾರಕೋಪ್ಪ, ಗೊರವನಕೊಳ್ಳ, ಮನಿಕಟ್ಟಿ, ಕಿಟದಾಳ, ಮುಳ್ಳೂರ, ಧಾರವಾಡ, ತಿರ್ಲಾಪೂರ, ಹಂಚಿನಾಳ, ಆಚಮಟ್ಟಿ ಗ್ರಾಮಗಳಿಂದ ಬಂದಂತಾ ಭೀರದೇವರ ಪಲ್ಲಕ್ಕಿಗಳು. ಸುಮಂಗಲಿಯರ ಆರತಿ, ಬಜನೆ, ಡೊಳ್ಳು, ಬಾಜಾಬಜಂತ್ರಿ, ಜಾಂಝ್‌ಪತಕದೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ



ಸಂಚರಿಸಿದವು.

ವಿಠಲ ಶಿದ್ದಕ್ಕನವರ, ಮಲ್ಲಪ್ಪ ಹೂಲಿ, ದ್ಯಾಮಣ್ಣ ಹೂಲಿ, ನೀಲಪ್ಪ ಶಿದ್ದಕ್ಕನವರ, ಮಂಜುನಾಥ ಗುಡೆಣ್ಣವರ, ಚದ್ರಶೇಖರ ಹಳ್ಳದ, ಮೈಲಾರಿ ಕುದರಿ, ನಿಂಗಪ್ಪ ಶಿದ್ದಕ್ಕನವರ, ರಾಮಾರೂಢ ಪಡಸುಣಗಿ, ಮಲ್ಲಪ್ಪ ಶಿದ್ದಕ್ಕನವರ, ಯಮನಪ್ಪ ಭೂವಿ, ಶಿದ್ದು ಕಲಾರಿ, ಹನಮಂತ ಶಿದ್ದಕ್ಕನವರ, ಮಲ್ಲಪ್ಪಾ ಪತ್ರಾವಳಿ, ಯಲ್ಲಪ್ಪ ಅಳಗೂಡಿ, ಪುಂಡಲಿಕ ಭೂವಿ, ಸಂಗಪ್ಪ ಬಿರಾಜನವರ ಹಾಗೂ ಗ್ರಾಮಸ್ಥರು ಭಕ್ತರು ಇದ್ದರು.

# ನಾಳೆ ಬಸವಣ್ಣನವರ ಜಯಂತಿ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಗೋಕಾಕ:** ನಗರದ ಶ್ರೀ ಬಸವೇಶ್ವರ ದೇವಸ್ಥಾನ ಟ್ರಸ್ಟ ಕಮೀಟಿ, ಬಸವ ಸಮೀತಿ ಹಾಗೂ ಬಸವ ಮಂದಿರ ಸತ್ಸಂಗ ಸಮೀತಿ ಇವರ ಸಂಯುಕ್ತ ಆಶ್ರಯದಲ್ಲಿ ಇಲ್ಲಿಯ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳ ಹಾಗೂ ರಾಚೋಟೇಶ್ವರ ಮಹಾಸ್ವಾಮಿಗಳವರ ನೇತ್ರತ್ವದಲ್ಲಿ ದಿ.20ರಂದು ಕಿಲ್ಲಾದ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ದಿ.20ರಂದು ಮುಂಜಾನೆ ಬಸವೇಶ್ವರ ಮೂರ್ತಿಗೆ ರುದ್ರಾಭಿಷೇಕ, ದೇವಸ್ಥಾನದಲ್ಲಿ ಷಟಸ್ಥಲ ಧ್ವಜಾರೋಹಣ ಹಾಗೂ ಶ್ರೀ ಮಹಾಲಿಂಗೇಶ್ವರ ಭಜನಾ ಮಂಡಳಿಯವರಿಂದ ಭಜನೆ ನಡೆಯುವದು. 9.30ಕ್ಕೆ ಬಸವೇಶ್ವರ ವೃತ್ತದಲ್ಲಿ ಷಟಸ್ಥಲ ಧ್ವಜಾರೋಹಣ, ಸರಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಮಾಡಲಾಗುವದು. ಮಧ್ಯಾಹ್ನ 11ಗಂಟೆಗೆ ದೇವಸ್ಥಾನದಲ್ಲಿ ಬಸವೇಶ್ವರರ ನಾಮಕರಣ ಹಾಗೂ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಲಿದೆ. ಸಂಜೆ 5ಗಂಟೆಗೆ ನಗರದ ಪ್ರಮುಖ ಬೀದಿಗಳಲ್ಲಿ ಸಕಲವಾದ್ಯ ಮೇಳ ಬಸವೇಶ್ವರರ ಭಾವಚಿತ್ರದೊಂದಿಗೆ ಪಲ್ಲಕ್ಕಿ ಉತ್ಸವ ಜರುಗುವದೆಂದು ಶ್ರೀ ಬಸವೇಶ್ವರ ದೇವಸ್ಥಾನ ಟ್ರಸ್ಟ ಕಮೀಟಿ ಅಧ್ಯಕ್ಷ ಎಸ್ ಬಿ ಮಗದುಮ ತಿಳಿಸಿದ್ದಾರೆ.

# ದೇಶದ ಪ್ರತಿಷ್ಠಿತ ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷ, ಪ್ರಧಾನ ಕಾರ್ಯದರ್ಶಿ ಆಯ್ಕೆ




ದೇಶದ ಪ್ರತಿಷ್ಠಿತ ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷರಾಗಿ ಆರ್. ರೇಣುಕುಮಾರ್, ಪ್ರಧಾನ ಕಾರ್ಯದರ್ಶಿಯಾಗಿ ರಾಧಾಕೃಷ್ಣ ಕುಂದಾಪುರ ಆಯ್ಕೆ ದೇಶದ ಪ್ರತಿಷ್ಠಿತ ದೆಹಲಿ ಕರ್ನಾಟಕ ಸಂಘದ 2026–28 ನೇ ಅವಧಿಗೆ ಅಧ್ಯಕ್ಷರಾಗಿ ಆರ್. ರೇಣುಕುಮಾರ್, ಉಪಾಧ್ಯಕ್ಷರಾಗಿ ವಸಂತ ಶೆಟ್ಟಿ ಬೆಳ್ಳಾರೆ ,ಶೋಭಾ ಗೌಡ, ಪ್ರಧಾನ ಕಾರ್ಯದರ್ಶಿಯಾಗಿ ರಾಧಾಕೃಷ್ಣ ಕುಂದಾಪುರ ಬೈಂದೂರು, ಖಜಾಂಚಿಯಾಗಿ ಎಂ.ಆಶಾಲತಾ,ಜಂಟಿ ಕಾರ್ಯದರ್ಶಿಯಾಗಿ ಜೆ. ಸಂತೋಷ, ಬಿ. ಎಸ್.ಅಶ್ವಿನಿ, ಕಾರ್ಯಕಾರಿ ಸಮಿತಿ ಸದಸ್ಯರಾಗಿ ಪೂಜಾ ಪಿ.ರಾವ್, ಎಂ.ಶಿವಪ್ಪ, ಡಾ. ವೆಂಕಟಾಚಲ ಜಿ.ಹೆಗಡೆ, ಡಾ. ಎಂ. ಎಸ್. ಶಶಿಕುಮಾರ್, ಬಿ. ನಾರಾಯಣ, ಎಂ. ಕೃಷ್ಣಪ್ಪ, ಬಿ. ಕೆ. ಜಯಶ್ರೀ, ಬಸವರಾಜು, ಶುಭ ದೇವಿ ಪ್ರಸಾದ್ ಇವರು ದೆಹಲಿ ಕರ್ನಾಟಕ ಸಂಘದ ಚುನಾವಣೆಯಲ್ಲಿ ಆಯ್ಕೆಯಾಗಿದ್ದಾರೆ.

ದೆಹಲಿ ಕರ್ನಾಟಕ ಸಂಘದ ನೂತನ ಪದಾಧಿಕಾರಿಗಳ ಕಾರ್ಯಕಾರಿ ಸಮಿತಿಯ ಸದಸ್ಯರಿಗೆ ಕಾಸರಗೋಡು ಕನ್ನಡ ಗ್ರಾಮದ ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನದ ಅಧ್ಯಕ್ಷ, ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು ಕೇರಳ ರಾಜ್ಯ ಘಟಕದ ಅಧ್ಯಕ್ಷ ಹಾಗೂ ಕೇರಳ ರಾಜ್ಯ 8ನೇ ಕನ್ನಡ ಸಮ್ಮೇಳನ– 2026– ಕೇರಳ– ಕರ್ನಾಟಕ ಉತ್ಸವ ಸಮಿತಿ, ಕೇರಳ – ಕರ್ನಾಟಕ ಭವನ ಸಮಿತಿ,ಕಾಸರಗೋಡು – ಗೋ – ಕುಟೀರ ಸಮಿತಿ ಇದರ ಅಧ್ಯಕ್ಷ ಶಿವರಾಮ ಕಾಸರಗೋಡು ಅಭಿನಂದನೆ ಸಲ್ಲಿಸಿದ್ದಾರೆ.

# ಜನಗಣತಿ, ಒಂದು ತಿಂಗಳು ಮನೆ ಮನೆ ಗಣತಿ ಕಾರ್ಯ ಆರಂಭ

ವಿಜಯನಗರ(ಹೊಸಪೇಟೆ): ಕಮಲಾಪುರ ಪಟ್ಟಣದ ಪಂಚಾಯತಿ ವ್ಯಾಪ್ತಿಯಲ್ಲಿ 2027ರ ಜನಗಣತಿಯ ಅಂಗವಾಗಿ ಮನೆ ಮನೆ ಗಣತಿ ಕಾರ್ಯ ನಡೆಯಲಿದೆ. ಗಣತಿದಾರರು ತಮ್ಮ ಮನೆಗಳಿಗೆ ಭೇಟಿ ನೀಡಿದಾಗ ಸಮರ್ಪಕ ಮತ್ತು ನಿಖರ ಮಾಹಿತಿ ಒದಗಿಸಬೇಕು. ಈ ಜನಗಣತಿ ಕಾರ್ಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಿಗೆ ಯಾವುದೇ ಗೊಂದಲಗಳಿದ್ದಲ್ಲಿ ಅಥವಾ ಹೆಚ್ಚಿನ ಮಾಹಿತಿ ಅಗತ್ಯವಿದ್ದಲ್ಲಿ ಕಮಲಾಪುರ ಪುರಸಭೆಯಲ್ಲಿ ತೆರೆಯಲಾಗಿರುವ ಜನಗಣತಿ ಸಹಾಯವಾಣಿ ಸಂಖ್ಯೆ 9740580083 ಗೆ ಸಂಪರ್ಕಿಸಬಹುದು ಎಂದು ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೋಟರಿ ಕ್ಲಬ್ ಆಫ್ ಬೆಳಗಾವಿ ದರ್ಪಣ ವತಿಯಿಂದ ಬಾಯಿ ಕ್ಯಾನ್ಸರ್ ತಪಾಸಣೆ ಶಿಬಿರ ಯಶಸ್ವಿಯಾಗಿ ಆಯೋಜನೆ




**ಬೆಳಗಾವಿ ವಾರ್ತೆ ಬೆಳಗಾವಿ:** ರೋಟರಿ ಕ್ಲಬ್ ಆಫ್ ಬೆಳಗಾವಿ ದರ್ಪಣ, KLE VK ದಂತ ವಿಜ್ಞಾನ ಸಂಸ್ಥೆಯ NSS ಘಟಕ 2 ಅವರ ಸಹಯೋಗದಲ್ಲಿ, 16 ಏಪ್ರಿಲ್ 2026 ರಂದು ಶ್ರೀ ರಾಮಲಿಂಗೇಶ್ವರ ದೇವಸ್ಥಾನ, ಶಿಂಡೋಳಿನಲ್ಲಿ ಉಚಿತ ಬಾಯಿ ಕ್ಯಾನ್ಸರ್ ತಪಾಸಣೆ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಈ ಕಾರ್ಯಕ್ರಮವು ಅಧ್ಯಕ್ಷರಾದ ರೋಟೇರಿಯನ್ ಅಡ್ವೋಕೇಟ್ ವಿಜಯಲಕ್ಷ್ಮಿ ಮನ್ನಿಕೇರಿ ಹಾಗೂ ಕಾರ್ಯದರ್ಶಿ ರೋಟೇರಿಯನ್ ಕಾವೇರಿ ಕರುರ್ ಅವರ ನೇತೃತ್ವದಲ್ಲಿ ನಡೆಯಿತು.

ಈ ಶಿಬಿರವು ಡಾ. ಆರತಿ ನೀಲಿ ಹಾಗೂ ಅವರ ತಂಡದ ಮಾರ್ಗದರ್ಶನದಲ್ಲಿ, ಡಾ. ಎಸ್. ಡಿ. ಬಾಲಿಗಾ (KAHER NSS ಘಟಕ 2) ಅವರ ಸಹಯೋಗದಲ್ಲಿ ನಡೆಸಲಾಯಿತು.

50 ಕ್ಕೂ ಹೆಚ್ಚು ಫಲಾನುಭವಿಗಳು ತಪಾಸಣೆಗೊಂಡರು, ಬಾಯಿ ಕ್ಯಾನ್ಸರ್‌ನ ಮುಂಚಿತ ಪತ್ತೆ ಹಾಗೂ ತಡೆಗಟ್ಟುವಿಕೆಗೆ ಒತ್ತು ನೀಡಲಾಯಿತು.

ಶಿಬಿರದ ಯಶಸ್ವಿ ಆಯೋಜನೆಗೆ ಉತ್ಸಾಹಿ NSS ಸ್ವಯಂಸೇವಕರು ಪ್ರಮುಖ ಪಾತ್ರವಹಿಸಿದರು. ರೋಟೇರಿಯನ್ ಸವಿತಾ ವೆಸ್ನೆ ಹಾಗೂ ಮಿಸ್ ಯಶಸ್ವಿ ವೆಸ್ನೆ ಅವರು ಶಿಬಿರದಲ್ಲಿ ಭಾಗವಹಿಸಿ ತಮ್ಮ ಸಹಕಾರ ನೀಡಿದರು.

ಶಿಬಿರದ ಸುಗಮ ಆಯೋಜನೆಗೆ ಸಹಕಾರ ನೀಡಿದ ಚೇರ್ಮನ್ ಶ್ರೀ ಬಾಬಗೌಡ ಪಾಟೀಲ ಹಾಗೂ ಶಿಂಡೋಳಿ ಗ್ರಾಮದ ನಿವಾಸಿಗಳಿಗೆ ರೋಟರಿ ಕ್ಲಬ್ ಕೃತಜ್ಞತೆಗಳನ್ನು ಸಲ್ಲಿಸಿದೆ.

ರೋಟರಿ ಕ್ಲಬ್ ಆಫ್ ಬೆಳಗಾವಿ ದರ್ಪಣ ಸಮಾಜದ ಆರೋಗ್ಯ ಕಾಳಜಿಗಾಗಿ ಇಂತಹ ಕಾರ್ಯಕ್ರಮಗಳನ್ನು ಮುಂದುವರಿಸಲು ಬದ್ಧವಾಗಿದೆ.

> "ಬಾಯಿ ಕ್ಯಾನ್ಸರ್ ವಿರುದ್ಧ ಹೋರಾಟದಲ್ಲಿ ಮುಂಚಿತ ಪತ್ತೆಯೇ ಅತ್ಯಂತ ಪರಿಣಾಮಕಾರಿ ರಕ್ಷಣೆ. ಸಮಯೋಚಿತ ತಪಾಸಣೆ ಮತ್ತು ಜಾಗೃತಿಯಿಂದ ಗಂಭೀರ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಬಹುದು ಹಾಗೂ ಜೀವಗಳನ್ನು ಉಳಿಸಬಹುದು. ಇಂತಹ ಕಾರ್ಯಕ್ರಮಗಳು ಜನರು ತಮ್ಮ ಆರೋಗ್ಯಕ್ಕೆ ಪ್ರಾಮುಖ್ಯತೆ ನೀಡಲು ಮತ್ತು ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆಯಲು ಪ್ರೇರೇಪಿಸುತ್ತವೆ."
>
> **– ರೋಟೇರಿಯನ್ ಅಡ್ವೋಕೇಟ್ ವಿಜಯಲಕ್ಷ್ಮಿ ಮನ್ನಿಕೇರಿ**

# ಬೆಟಗೇರಿ ಶ್ರೀ ಸದ್ಗುರು ಯಲ್ಲಾಲಿಂಗ ಸ್ವತಂತ್ರ ಪದವಿಪೂರ್ವ ಕಾಲೇಜಿಗೆ ಉತ್ತಮ ರಿಸಲ್ಟ್



**ಬೆಳಗಾವಿ ವಾರ್ತೆ ಬೆಟಗೇರಿ:** ಗೋಕಾಕ ತಾಲೂಕಿನ ಬೆಟಗೇರಿ ಶ್ರೀ ಸದ್ಗುರು ಯಲ್ಲಾಲಿಂಗಸ್ವತಂತ್ರ ಪದವಿಪೂರ್ವ ಕಾಲೇಜಿನ ವಾಣಿಜ್ಯ ವಿಭಾಗದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಕುಮಾರಿ ಕೀರ್ತಿ ಹಿರೇಮಠ 581ಅಂಕ(ಶೇ.96)ಪಡದು ಕಾಲೇಜಿಗೆ ಪ್ರಥಮ ಸ್ಥಾನ, ಲಕ್ಷ್ಮೀ ಹೆಗಡೆ 567 ಅಂಕ(ಶೇ.94)ದ್ವಿತೀಯ ಸ್ಥಾನ, ಪವಿತ್ರಾ ಮುಧೋಳ 554 ಅಂಕ(ಶೇ.92)ಪಡೆದು ತೃತೀಯಸ್ಥಾನ ಪಡೆದಿದ್ದಾರೆ.

**ಕಲಾವಿಭಾಗ:** ಶ್ರೀ ಸದ್ಗುರು ಯಲ್ಲಾಲಿಂಗಸ್ವತಂತ್ರ ಪದವಿಪೂರ್ವ ಕಾಲೇಜಿನ ಕಲಾವಿಭಾಗದಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಕುಮಾರಿ. ರಚನಾ ಸವತಿಕಾಯಿ 558 ಅಂಕ(ಶೇ.93)ಪ್ರಥಮ ಸ್ಥಾನ, ರೇಣುಕಾ ಗೌಡರ 554(ಶೇ.92)ದ್ವಿತೀಯ ಸ್ಥಾನ, ಪವಿತ್ರಾ ಮಾಕಾಳಿ546ಅಂಕ(ಶೇ.91) ತೃತೀಯ ಸ್ಥಾನ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಅಲ್ಲದೇ ಹಲವಾರು ವಿದ್ಯಾರ್ಥಿ ಮತ್ತು ವಿದ್ಯಾರ್ಥಿನೀಯರು ಹಲವಾರು ವಿಷಯಗಳಲ್ಲಿ 100ಕ್ಕೆ 100 ಅಂಕ ಪಡೆದು ಈ ಸಲ ಕಾಲೇಜಿನಲ್ಲಿ ದಾಖಲೆ ಮಾಡಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯ ಹಾಗೂ ಆಡಳಿತ ಮಂಡಳಿಯವರು ಹರ್ಷ ವ್ಯಕ್ತಪಡಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001